## ಕರ್ನಾಟಕ ಸರ್ಕಾರದ ನಡವಳಿ

**ವಿಷಯ:** ಶ್ರೀಮತಿ ಕೆ ವಸಂತಲಕ್ಷ್ಮಿ, ಅಧ್ಯಕ್ಷರು, ಜವನಗೊಂಡನಹಳ್ಳಿ ಗ್ರಾಮ ಪಂಚಾಯತಿ ಹಿರಿಯೂರು ತಾಲ್ಲೂಕು, ಚಿತ್ರದುರ್ಗ ಜಿಲ್ಲೆ ಇವರ ವಿರುದ್ಧ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993ರ ಪ್ರಕರಣ 43(ಎ) ಮತ್ತು 48(4) ರಡಿ ಕ್ರಮ ಜರುಗಿಸುವ ಕುರಿತು.

**ಓದಲಾಗಿದೆ:**

1. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 1135 ಗ್ರಾಪಂಅ 2018 ದಿನಾಂಕ:02.02.2019.
2. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯಿತಿ ಚಿತ್ರದುರ್ಗ ಜಿಲ್ಲೆ ಇವರ ಪತ್ರ ಸಂಖ್ಯೆ:ಜಿಪಂ:ಆ(3):ಸಿಸಿಎ/ಸಿಆರ್–111/2018–19, ದಿನಾಂಕ:08.04.2019
3. ಪ್ರಾದೇಶಿಕ ಆಯುಕ್ತರು, ಬೆಂಗಳೂರು ವಿಭಾಗ ಬೆಂಗಳೂರು, ಇವರ ಪತ್ರ ಹಾಗೂ ವಿಚಾರಣಾ ವರದಿ ಸಂಖ್ಯೆ:ಪ್ರಾಆಕ/ಅಭಿವೃದ್ಧಿ/ಸಿಆರ್/29/2019–20, ದಿನಾಂಕ:20.12.2019.

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರಮಾಂಕ (1)ರ ಸರ್ಕಾರಿ ಆದೇಶದಲ್ಲಿ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 43(ಎ) ರಡಿ ಗ್ರಾಮ ಪಂಚಾಯಿತಿ ಸದಸ್ಯರುಗಳು, ಪ್ರಕರಣ 48(4) ಮತ್ತು 48(5) ರಡಿ ಅಧ್ಯಕ್ಷರು ಹಾಗೂ ಉಪಾಧ್ಯಕ್ಷರುಗಳ ಮೇಲೆ ದುರ್ವರ್ತನೆ, ಅಧಿಕಾರ ಮತ್ತು ಹಣ ದುರುಪಯೋಗಕ್ಕಾಗಿ ಕ್ರಮಕೈಗೊಳ್ಳುವ ಸಲುವಾಗಿ ವಿಚಾರಣೆ ನಡೆಸುವ ಅಧಿಕಾರವನ್ನು ಪ್ರಾದೇಶಿಕ ಆಯುಕ್ತರುಗಳಿಗೆ ವಹಿಸಲಾಗಿದೆ.

ಅದರಂತೆ, ಮೇಲೆ ಓದಲಾದ ಕ್ರಮಾಂಕ (2)ರಲ್ಲಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯಿತಿ ಚಿತ್ರದುರ್ಗ ಜಿಲ್ಲೆ ಇವರು ಕೆ ವಸಂತಲಕ್ಷ್ಮಿ, ಅಧ್ಯಕ್ಷರು, ಜವನಗೊಂಡನಹಳ್ಳಿ ಗ್ರಾಮ ಪಂಚಾಯತಿ ಹಿರಿಯೂರು ತಾಲ್ಲೂಕು, ಚಿತ್ರದುರ್ಗ ಜಿಲ್ಲೆ ಇವರು ಸದರಿ ಗ್ರಾಮ ಪಂಚಾಯಿತಿಯ ವ್ಯಾಪ್ತಿಯಲ್ಲಿ 3 ಲೆಔಟ್‌ಗಳ 609 ನಿವೇಶನಗಳ ಹಂಚಿಕೆಗೆ ಮತ್ತು ಖಾತೆ ತೆರೆಯಲು ಗ್ರಾಮ ಪಂಚಾಯಿತಿ ಸಭೆಯಲ್ಲಿ ಅಕ್ರಮವಾಗಿ ಅನುಮೋದನೆ ನೀಡಿರುವ ಬಗ್ಗೆ ಅವರ ವಿರುದ್ಧ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993ರ ಪ್ರಕರಣ 43(ಎ) ರಡಿ ಕ್ರಮ ಜರುಗಿಸುವಂತೆ ಪ್ರಾದೇಶಿಕ ಆಯುಕ್ತರು, ಬೆಂಗಳೂರು ವಿಭಾಗ ಬೆಂಗಳೂರು ರವರಿಗೆ ಶಿಫಾರಸ್ಸು ಮಾಡಿರುತ್ತಾರೆ.

ಮೇಲೆ ಓದಲಾದ ಕ್ರಮಾಂಕ (3) ವಿಚಾರಣಾ ವರದಿಯಲ್ಲಿ, ಪ್ರಾದೇಶಿಕ ಆಯುಕ್ತರು, ಬೆಂಗಳೂರು ವಿಭಾಗ ಬೆಂಗಳೂರು ಇವರು ಚಿತ್ರದುರ್ಗ ಜಿಲ್ಲೆ, ಹಿರಿಯೂರು ತಾಲ್ಲೂಕು, ಜವನಗೊಂಡನಹಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಹೊಸದಾಗಿ ನಿರ್ಮಾಣಗೊಂಡಿರುವ 3 ಬಡಾವಣೆಗಳಲ್ಲಿ ಒಟ್ಟು 609 ನಿವೇಶನಗಳ ಹಂಚಿಕೆಗೆ ಸಂಬಂಧಿಸಿದಂತೆ, ದಿನಾಂಕ:12.07.2019, 26.07.2019 ಹಾಗೂ 14.01.2019 ರಂದು ಅಧ್ಯಕ್ಷರಾದ ಶ್ರೀಮತಿ. ಕೆ.ವಸಂತಲಕ್ಷ್ಮಿ ರವರಿಗೆ ನೋಟೀಸ್ ನೀಡಿ ವಿಚಾರಣೆ ಮಾಡಲಾಗಿ ದಿನಾಂಕ:12.07.2019 ಹಾಗೂ 26.07.2019 ರಂದು ನಡೆದ ವಿಚಾರಣೆಗೆ ಹಾಜರಾಗಿ ದಿನಾಂಕ:12.07.2019ರಂದು ಲಿಖಿತ ಹೇಳಿಕೆ ನೀಡಿರುತ್ತಾರೆ. ದಿನಾಂಕ: 26.10.2017 ಮತ್ತು ದಿನಾಂಕ:25.06.2018ರ ಗ್ರಾಮ ಪಂಚಾಯಿತಿ ಸಾಮಾನ್ಯ ಸಭೆಗಳಲ್ಲಿ ಖಾತೆಗಳನ್ನು ತೆರೆಯಲು ಅಧ್ಯಕ್ಷರಾದ ಶ್ರೀಮತಿ. ಕೆ.ವಸಂತಲಕ್ಷ್ಮಿ ಹಾಗೂ ಸದಸ್ಯರು ಅನುಮೋದನೆ ನೀಡಿರುತ್ತಾರೆ. ದಿನಾಂಕ:03.04.2018 ರಿಂದ ದಿನಾಂಕ:25.09.2018 ರ ಅವಧಿಯಲ್ಲಿ 609 ನಿವೇಶನಗಳ ಹಂಚಿಕೆ ಬಾಬ್ತು ನಿರ್ವಹಣಾ ಶುಲ್ಕ, ಸೇವಾ ಶುಲ್ಕ ಹಾಗೂ ಇ–ಸ್ವತ್ತು ಶುಲ್ಕಗಳನ್ನು ಗ್ರಾಮ ಪಂಚಾಯಿತಿಗೆ ಪಾವತಿಸಿಕೊಳ್ಳದೆ ಇ–ಸ್ವತ್ತು ನಮೂನೆ 9, 11ಎ. ಗಳನ್ನು ಸೃಜಿಸುವ ಮೂಲಕ ಜವನಗೊಂಡನಹಳ್ಳಿ ಗ್ರಾಮ ಪಂಚಾಯಿತಿ ಅಧ್ಯಕ್ಷರಾದ ಶ್ರೀಮತಿ. ಕೆ.ವಸಂತಲಕ್ಷ್ಮಿ ಹಾಗೂ ಅಂದಿನ ಪಿ.ಡಿ.ಓ (ಪ್ರಭಾರ) ಶ್ರೀ. ಶಿವಣ್ಣರವರು ಗ್ರಾಮ ಪಂಚಾಯಿತಿಗೆ ಸುಮಾರು ರೂ. 10,60,900/– ಗಳನ್ನು ನಷ್ಟಕ್ಕೆ ಕಾರಣರಾಗಿ ಕರ್ತವ್ಯಲೋಪ ಎಸಗಿರುವುದು ಕಂಡುಬಂದಿರುವುದರಿಂದ ಅಂದಿನ ಪಿ.ಡಿ.ಓ (ಪ್ರಭಾರ) ಶ್ರೀ. ಶಿವಣ್ಣರವರ ವಿರುದ್ಧ ಇಲಾಖಾ ವಿಚಾರಣೆಗೆ ಕಾಯ್ದಿರಿಸಿ ಈಗಾಗಲೇ ಅಮಾನತ್ತುಗೊಳಿಸಲಾಗಿರುತ್ತದೆ.

ಜವನಗೊಂಡನಹಳ್ಳಿ ಗ್ರಾಮ ಪಂಚಾಯಿತಿಯಲ್ಲಿ ಹೊಸದಾಗಿ ನಿರ್ಮಾಣಗೊಂಡಿರುವ ಬಡಾವಣೆಗೆ ನಗರ ಮತ್ತು ಗ್ರಾಮಾಂತರ ಯೋಜನಾ ಸಹಾಯಕ ನಿರ್ದೇಶಕರಿಂದ ತಾಂತ್ರಿಕವಾಗಿ ಅನುಮೋದಿಸಿರುವ ನಕ್ಷೆ ಪಡೆದಿರುವುದಿಲ್ಲ. ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆರವರಿಂದ ಲೇಔಟ್‌ಗೆ ಅನುಮೋದನೆ ಪಡೆದಿರುವುದಿಲ್ಲ. ಲೇಔಟ್ ಅಭಿವೃದ್ಧಿಪಡಿಸಲು ಸರ್ಕಾರದ ನಿಯಮಗಳಂತೆ ಅಂದಾಜುಪಟ್ಟಿ ತಯಾರಿಸಿ ಸರ್ಕಾರದ ನಿಯಮಾವಳಿಯಂತೆ ಖಾತೆ ತೆರೆಯುವ ಮೊದಲು ಅಂದಾಜು ಪಟ್ಟಿಯ ಶೇಕಡ–5/– ನಿರ್ವಹಣಾ ವೆಚ್ಚ, ಶೇಕಡ 5/– ರಷ್ಟು ಸೇವಾ ಶುಲ್ಕವನ್ನು ಪಡೆದಿರುವುದಿಲ್ಲ. ಇ–ಸ್ವತ್ತಿಗೆ ಸಂಬಂಧಿಸಿದಂತೆ ಶುಲ್ಕ ಕಟ್ಟಿಸಿಕೊಂಡಿರುವುದಿಲ್ಲ. ಕಾರ್ಯನಿರ್ವಾಹಕ ಅಧಿಕಾರಿಗಳು ತಾಲ್ಲೂಕು ಪಂಚಾಯಿತಿರವರಿಂದ ಅನುಮೋದನೆ ಪಡೆದಿರುವುದಿಲ್ಲ. ಶ್ರೀಮತಿ ಕೆ.ವಸಂತಲಕ್ಷ್ಮೀ, ಅಧ್ಯಕ್ಷರು, ಶ್ರೀಮತಿ. ಕವಿತಾ ಚಿತ್ತಪ್ಪ, ಉಪಾಧ್ಯಕ್ಷರು ಹಾಗೂ ಸದಸ್ಯರಾದ ಶ್ರೀ. ಎಲ್. ಪುಟ್ಟರಾಜು, ಶ್ರೀ. ಎನ್. ಕರಿಯಪ್ಪ, ಶ್ರೀಮತಿ ಜಾನಕಮ್ಮ, ಶ್ರೀ ರವಿಪ್ರಕಾಶ್, ಶ್ರೀಮತಿ. ವಹಿದಾ ಫರ್ವಿನ್, ಶ್ರೀಮತಿ ಮರಿಯಂ ಬೀ, ಶ್ರೀ. ಎಸ್ ಚಂದ್ರಪ್ಪ, ಶ್ರೀಮತಿ ನಹೀದ್, ಶ್ರೀಮತಿ. ಯಾಸ್ಮಿನ್, ಶ್ರೀ. ಕೆ.ಪಾಂಡುರಂಗಪ್ಪ, ಶ್ರೀ ಜೆ.ಡಿ. ಶ್ರೀನಿವಾಸ್, ಶ್ರೀಮತಿ. ಎ.ಕೆ. ರಂಗಲಕ್ಷ್ಮೀ, ಶ್ರೀ. ದೊರೆಸ್ವಾಮಿ, ಶ್ರೀಮತಿ. ವಿಜಯಮ್ಮ, ಶ್ರೀಮತಿ ಎಲ್.ಎನ್. ಲಕ್ಷ್ಮೀ, ಶ್ರೀ. ಆರ್. ಸೂರ್ಯನಾಯ್ಕ ಜವನಗೊಂಡನಹಳ್ಳಿ ಗ್ರಾಮ ಪಂಚಾಯಿತಿರವರು ಜವನಗೊಂಡನಹಳ್ಳಿ ಗ್ರಾಮ ಪಂಚಾಯಿತಿಯಲ್ಲಿ ನಿಯಮಾನುಸಾರ ಅಭಿವೃದ್ಧಿಪಡಿಸದಿರುವ ಒಟ್ಟು 609 ನಿವೇಶನಗಳಿಗೆ ಸಂಬಂಧಿಸಿದಂತೆ, ನಿಯಮಗಳನ್ನು ಉಲ್ಲಂಘಿಸಿ ಖಾತೆಗಳನ್ನು ತೆರಯಲು ದಿನಾಂಕ:26.10.2017 ಮತ್ತು ದಿನಾಂಕ:25.06.2018ರ ಗ್ರಾಮ ಪಂಚಾಯಿತಿ ಸಾಮಾಣ್ಯ ಸಭೆಗಳಲ್ಲಿ ಅಕ್ರಮವಾಗಿ ಅನುಮೋದನೆ ನೀಡುವ ಮೂಲಕ ಸರ್ಕಾರಕ್ಕೆ ಸುಮಾರು ಒಟ್ಟು ರೂ.10,60,900/–ಗಳ ನಷ್ಟವುಂಟು ಮಾಡಿರುವುದು ಪ್ರಸ್ತಾವನೆಯಲ್ಲಿರುವ ದಾಖಲೆ ಹಾಗೂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯಿತಿ, ಚಿತ್ರದುರ್ಗರವರ ವರದಿಯಿಂದ ಸರ್ಕಾರಕ್ಕೆ ನಷ್ಟ ಮಾಡಿರುವುದು ದೃಢಪಟ್ಟಿರುತ್ತದೆ. ಆದ ಕಆರಣ, ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ 1993 ರ ಪ್ರಕರಣ 43 (ಎ) ಮತ್ತು 48(4) ಮತ್ತು 48(5) ರನ್ವಯ ಕ್ರಮ ಜರುಗಿಸಬಹುದಾಗಿರುತ್ತದೆಂದು ಸರ್ಕಾರಕ್ಕೆ ಶಿಫಾರಸ್ಸು ಮಾಡಿರುತ್ತಾರೆ.

ಈ ಪ್ರಕರಣದ ವಿಚಾರಣೆ ವರದಿ ಮತ್ತು ದಾಖಲೆಗಳನ್ನು ಪರಿಶೀಲಿಸಲಾಗಿ, ಶ್ರೀಮತಿ ಕೆ ವಸಂತಲಕ್ಷ್ಮೀ ಅಧ್ಯಕ್ಷರು, ಜವನಗೊಂಡನಹಳ್ಳಿ ಗ್ರಾಮ ಪಂಚಾಯತಿ ಹಿರಿಯೂರು ತಾಲ್ಲೂಕು, ಚಿತ್ರದುರ್ಗ ಜಿಲ್ಲೆ ಇವರ ಮೇಲಿನ ಆಪಾದನೆ ಸಾಬೀತಾಗಿರುವ ಹಿನ್ನಲೆಯಲ್ಲಿ ಸದರಿಯವರ ವಿರುದ್ಧ ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ, 1993 ಪ್ರಕರಣದ 43(ಎ) ರನ್ವಯ ಅಧ್ಯಕ್ಷ ಸ್ಥಾನದಿಂದ ವಜಾಗೊಳಿಸಿ ಸದಸ್ಯತ್ವ ತೆಗೆದು ಹಾಕಲು ಸರ್ಕಾರವು ನಿರ್ಣಯಿಸಿದೆ.

ಅದರಂತೆ ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 25 ಗ್ರಾಪಂಅ 2020 ಬೆಂಗಳೂರು, ದಿನಾಂಕ: 22.01.2020**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಶ್ರೀಮತಿ ಕೆ ವಸಂತಲಕ್ಷ್ಮೀ, ಅಧ್ಯಕ್ಷರು, ಜವನಗೊಂಡನಹಳ್ಳಿ ಗ್ರಾಮ ಪಂಚಾಯತಿ ಹಿರಿಯೂರು ತಾಲ್ಲೂಕು, ಚಿತ್ರದುರ್ಗ ಜಿಲ್ಲೆ ಗ್ರಾಮ ಪಂಚಾಯಿತಿಯ ವ್ಯಾಪ್ತಿಯಲ್ಲಿ 3 ಲೆಔಟ್‌ಗಳ 609 ನಿವೇಶನಗಳ ಹಂಚಿಕೆಗೆ ಮತ್ತು ಖಾತೆ ತೆರೆಯಲು ಗ್ರಾಮ ಪಂಚಾಯಿತಿ ಸಭೆಯಲ್ಲಿ ಅಕ್ರಮವಾಗಿ ಅನುಮೋದನೆ ನೀಡಿರುವ ಬಗ್ಗೆ ಹಾಗೂ ನಿವೇಶನಗಳಿಗೆ ಸಂಬಂಧಿಸಿದಂತೆ, ನಿಯಮಗಳನ್ನು ಉಲ್ಲಂಘಿಸಿ ಖಾತೆಗಳನ್ನು ತೆರಯಲು ದಿನಾಂಕ:26.10.2017 ಮತ್ತು ದಿನಾಂಕ:25.06.2018ರ ಗ್ರಾಮ ಪಂಚಾಯಿತಿ ಸಾಮಾನ್ಯ ಸಭೆಗಳಲ್ಲಿ ಅಕ್ರಮವಾಗಿ ಅನುಮೋದನೆ ನೀಡುವ ಮೂಲಕ ಸರ್ಕಾರಕ್ಕೆ ಸುಮಾರು ರೂ.10,60,900/–ಗಳ ನಷ್ಟ ಉಂಟು ಮಾಡಿರುವುದು ಮತ್ತು ಕಾನೂನು ಬಾಹಿರ, ಕರ್ತವ್ಯ ನಿರ್ಲಕ್ಷ್ಯತೆ ಹಾಗೂ ದುರ್ನಡತೆ ಮತ್ತು ಅಧಿಕಾರ ದುರುಪಯೋಗ ಮಾಡಿರುವ ಆಪಾದನೆ ಸಾಬೀತಾಗಿರುತ್ತದೆ. ಆದುದರಿಂದ ಶ್ರೀಮತಿ ಕೆ ವಸಂತಲಕ್ಷ್ಮೀ, ಅಧ್ಯಕ್ಷರು ಮತ್ತು ಶ್ರೀಮತಿ ಕವಿತ ಚಿತ್ತಪ್ಪ ಉಪಾಧ್ಯಕ್ಷರು, ಜವನಗೊಂಡನಹಳ್ಳಿ ಗ್ರಾಮ ಪಂಚಾಯತಿ ಹಿರಿಯೂರು ತಾಲ್ಲೂಕು, ಚಿತ್ರದುರ್ಗ ಜಿಲ್ಲೆ ರವರನ್ನು ಕರ್ನಾಟಕ ಗ್ರಾಮ್ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993ರ ಪ್ರಕರಣದ 48(4) ಮತ್ತು 48(5) ರನ್ವಯ

ಜವನಗೊಂಡನಹಳ್ಳಿ ಗ್ರಾಮ ಪಂಚಾಯತಿಯ ಅಧ್ಯಕ್ಷ ಮತ್ತು ಉಪಾಧ್ಯಕ್ಷ ಸ್ಥಾನದಿಂದ ಹಾಗೂ ಸದಸ್ಯತ್ವದಿಂದ ತಕ್ಷಣದಿಂದ ಜಾರಿಗೆ ಬರುವಂತೆ ತೆಗೆದು ಹಾಕಿದೆ ಹಾಗೂ ಈ ಅಕ್ರಮದಲ್ಲಿ ಬಾಗಿ ಆದಂತಹ ಶ್ರೀ. ಎಲ್. ಪುಟ್ಟರಾಜು, ಶ್ರೀ. ಎನ್. ಕರಿಯಪ್ಪ, ಶ್ರೀಮತಿ ಜಾನಕಮ್ಮ, ಶ್ರೀ ರವಿಪ್ರಕಾಶ್, ಶ್ರೀಮತಿ. ವಹಿದಾ ಫರ್ವಿನ್, ಶ್ರೀಮತಿ ಮರಿಯಂ ಬೀ, ಶ್ರೀ. ಎಸ್ ಚಂದ್ರಪ್ಪ, ಶ್ರೀಮತಿ ನಹೀದ್, ಶ್ರೀಮತಿ. ಯಾಸ್ಮಿನ್, ಶ್ರೀ. ಕೆ.ಪಾಂಡುರಂಗಪ್ಪ, ಶ್ರೀ ಜೆ.ಡಿ. ಶ್ರೀನಿವಾಸ್, ಶ್ರೀಮತಿ. ಎ.ಕೆ. ರಂಗಲಕ್ಷ್ಮೀ, ಶ್ರೀ. ದೊರೆಸ್ವಾಮಿ, ಶ್ರೀಮತಿ. ವಿಜಯಮ್ಮ, ಶ್ರೀಮತಿ ಎಲ್.ಎನ್. ಲಕ್ಷ್ಮೀ, ಶ್ರೀ. ಆರ್. ಸೂರ್ಯನಾಯ್ಕ ಗ್ರಾಮ ಪಂಚಾಯಿತಿ ಸದಸ್ಯರುಗಳನ್ನೂ ಸಹ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993ರ ಪ್ರಕರಣದ 43(ಎ) ರಡಿ ಸದಸ್ಯತ್ವ ಸ್ಥಾನದಿಂದ ತೆಗೆದು ಹಾಕಿ ಆದೇಶಿಸಿದೆ.

ಮುಂದುವರೆದು, ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993ರ ಪ್ರಕರಣದ 157(2) ಮತ್ತು 246(8) ರಡಿ ದುರುಪಯೋಗಪಡಿಸಿಕೊಂಡಿರುವ ಮೊತ್ತವನ್ನು ಕ್ರಿಮಿನಲ್ ಮೊಕದ್ದಮೆ ದಾಖಲಿಸಿ ಸಂಬಂಧಿಸಿದವರಿಂದ ವಸೂಲಿ ಮಾಡಲು ಇವರಿಗೆ ತಾಲ್ಲೂಕು ಪಂಚಾಯಿತಿ, ಕಾರ್ಯನಿರ್ವಾಹಕ ಅಧಿಕಾರಿ ಹಿರಿಯೂರು ರವರಿಗೆ ಆದೇಶಿಸಿದೆ.

ಈ ಪ್ರಕರಣದಲ್ಲಿ ಭಾಗಿಯಾಗಿದ್ದ ಶ್ರೀ ಶಿವಣ್ಣ, ಹಿಂದಿನ ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಜವನಗೊಂಡನಹಳ್ಳಿ ಗ್ರಾಮ ಪಂಚಾಯತಿ, ಹಿರಿಯೂರು ತಾಲ್ಲೂಕು, ಚಿತ್ರದುರ್ಗ ಜಿಲ್ಲೆ ಇವರ ವಿರುದ್ಧ ನಿಯಮಾನುಸಾರ ಶಿಸ್ತು ಕ್ರಮ ಜರುಗಿಸಲು, ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ ಚಿತ್ರದುರ್ಗ ಜಿಲ್ಲೆ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

B. Naveenkumar 22/1/2020.
*(ನವೀನ್ ಕುಮಾರ್. ಬಿ)*
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,(ಗ್ರಾ.ಪಂ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

<u>ಪ್ರತಿ:</u>

1) ಪ್ರಾದೇಶಿಕ ಆಯುಕ್ತರು, ಬೆಂಗಳೂರು ವಿಭಾಗ ಬೆಂಗಳೂರು, 2ನೇ ಮಹಡಿ, ಬಿ.ಎಂ.ಟಿ.ಸಿ. ಕಟ್ಟಡ, ಶಾಂತಿನಗರ, ಕೆ.ಹಚ್. ರಸ್ತೆ, ಬೆಂಗಳೂರು.
2) ಜಿಲ್ಲಾಧಿಕಾರಿಗಳು, ಚಿತ್ರದುರ್ಗ ಜಿಲ್ಲೆ.
3) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ ಚಿತ್ರದುರ್ಗ ಜಿಲ್ಲೆ.
4) ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ ಹಿರಿಯೂರು ತಾಲ್ಲೂಕು, ಚಿತ್ರದುರ್ಗ ಜಿಲ್ಲೆ.
5) ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಜವನಗೊಂಡನ ಹಳ್ಳಿ ಗ್ರಾಮ ಪಂಚಾಯತಿ, ಹಿರಿಯೂರು ತಾಲ್ಲೂಕು, ಚಿತ್ರದುರ್ಗ ಜಿಲ್ಲೆ.
6) ಶ್ರೀಮತಿ ಕೆ ವಸಂತಲಕ್ಷ್ಮಿ, ಅಧ್ಯಕ್ಷರು, ಜವನಗೊಂಡನಹಳ್ಳಿ ಗ್ರಾಮ ಪಂಚಾಯತಿ ಹಿರಿಯೂರು ತಾಲ್ಲೂಕು, ಚಿತ್ರದುರ್ಗ ಜಿಲ್ಲೆ. (ಇವರಿಗೆ **ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯಿತಿ, ಹಿರಿಯೂರು, ಚಿತ್ರದುರ್ಗ ಜಿಲ್ಲೆ ಇವರ ಮುಖಾಂತರ**)

<u>ಪ್ರತಿಯನ್ನು ಮಾಹಿತಿಗಾಗಿ:</u>

1) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.

2) ಸರ್ಕಾರದ ಮಾನ್ಯ ಕಾರ್ಯದರ್ಶಿಗಳು(ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿ.
3) ಕಛೇರಿ ಪ್ರತಿ/ಹೆಚ್ಚುವರಿ ಪ್ರತಿ.
4) ಗಣಕ ಕೋಶ.